## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಬಿ.ತಿಮ್ಮರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಶಿರಾ, ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಡಿ/7616/2015/ಎಆರ್‌ಎಲ್‌ಓ-2, ದಿನಾಂಕ:21.09.2016

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಡಿ/7616/2015/ಎಆರ್‌ಎಲ್‌ಓ-2, ದಿನಾಂಕ: 17.10.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ದೂರುದಾರರಾದ ಶ್ರೀ ಸಂಜೀವಶೆಟ್ಟಿ, ಬಿನ್ ಗೋವಿಂದರಾಜು, ಉದ್ದರಾಮನಹಳ್ಳಿ, ನಾದೂರು ಅಂಚೆ, ಶಿರಾ ತಾಲ್ಲುಕು ಇವರು ದೂರು ಸಲ್ಲಿಸಿ, ಶಿರಾ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಉದ್ದರಾಮನಹಳ್ಳಿ ಗ್ರಾಮದಲ್ಲಿ ಕೆಲವು ಜನರು ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಸುಮಾರು 5 ಪೆಟ್ಟಿಗೆ ಅಂಗಡಿಗಳನ್ನು ಇಟ್ಟು ಸಾರ್ವಜನಿಕರಿಗೆ ಓಡಾಡಲು ತೊಂದರೆ ಮಾಡಿರುತ್ತಾರೆಂದು ತಿಳಿಸುತ್ತಾ, ಈ ಕುರಿತು ಕೆಳಕಂಡ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಅತಿಕ್ರಮಿಸಿದ ಅಂಗಡಿಗಳನ್ನು ಸ್ಥಳಾಂತರಿಸಬೇಕೆಂದು ನೀಡಿದ್ದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರನ್ವಯ ತನಿಖೆಗೆ ಕೈಗೆತ್ತಿಕೊಳ್ಳಲಾಗಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರು ವರದಿಸಿರುತ್ತಾರೆ.

| ಕ್ರ.ಸಂ. | ಅಧಿಕಾರಿಯ ಹೆಸರು ಮತ್ತು ಪದನಾಮ | ಎದುರುದಾರರ ಸಂಖ್ಯೆ |
|---|---|---|
| 1. | ಶ್ರೀ ಕೆ.ವಿಜಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನಾದೂರು ಗ್ರಾಮ ಪಂಚಾಯತಿ ಶಿರಾ ತಾಲ್ಲೂಕು. | 1 |
| 2. | ಶ್ರೀ ತಿಮ್ಮರಾಯಪ್ಪ ಬಿ. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಶಿರಾ | 2 |
| 3. | ಶ್ರೀ ಚಿಕ್ಕದಾಸಪ್ಪ, ನಿವೃತ್ತ ಕಾರ್ಯಪಾಲಕ ಇಂಜಿನೀಯರ್ ಲೋಕೋಪಯೋಗಿ ಬಂದರು ಮತ್ತು ಜಲಸಾರಿಗೆ ಇಲಾಖೆ, ಉಪ ವಿಭಾಗ ಶಿರಾ. | 3 |

ದೂರುದಾರರ ದೂರಿನ ಬಗ್ಗೆ ಎದುರುದಾರರು- ರವರು ತಮ್ಮ ಆಕ್ಷೇಪಣೆಯಲ್ಲಿ ಮಾನ್ಯ ತಹಶೀಲ್ದಾರ್ ಶಿರಾ ರವರ ವರದಿಯ ಪ್ರಕಾರ ಈ ಪೆಟ್ಟಿಗೆ ಅಂಗಡಿಗಳು 8 ಗುಂಟೆಯ ಲೋಕೋಪಯೋಗಿ ಇಲಾಖೆಗೆ ಸೇರಿದ ಗ್ರಾವೆಲ್ ಫಿಟ್ ಪ್ರದೇಶದಲ್ಲಿ ಇರುತ್ತದೆಂದು ತಿಳಿಸಿದ್ದಾರೆಂದು, ಎದುರುದಾರರು-2 ರವರು ಎದುರುದಾರ-1ರವರ ಆಕ್ಷೇಪಣೆಯಲ್ಲಿಯ ಅಂಶಗಳನ್ನು ಅಳವಡಿಸಿಕೊಂಡಿರುತ್ತಾರೆಂದು ತಿಳಿಸಿರುತ್ತಾರೆ. ಮತ್ತು ಎದುರುದಾರರು-3 ರವರು ತಮ್ಮ ಆಕ್ಷೇಪಣೆಯಲ್ಲಿ ಈ ಪೆಟ್ಟಿಗೆ ಅಂಗಡಿಗಳು ತಾತ್ಕಾಲಿಕವಾಗಿದ್ದು, ರಸ್ತೆ ಮಧ್ಯ ಭಾಗದಿಂದ 25 ಮೀ., ಅಂತರ ಬಿಟ್ಟು ಇಟ್ಟುಕೊಂಡಿರುತ್ತಾರೆಂದು, ಈ ತಾತ್ಕಾಲಿಕ ಪೆಟ್ಟಿಗೆ ಅಂಗಡಿಗಳಿಗೆ ಎನ್.ಓ.ಸಿ.ಯನ್ನು ನೀಡಿರುವುದಿಲ್ಲವೆಂದು, ಮತ್ತು ಈ ತಾತ್ಕಾಲಿಕ ಅಂಗಡಿಗಳನ್ನು ತೆರವುಗೊಳಿಸುವ ಅಧಿಕಾರ ವ್ಯಾಪ್ತಿ ಎದುರುದಾರರು-1 ರವರಿಗೆ ಇರುತ್ತದೆಂದು ತಿಳಿಸಿರುವುದಾಗಿ ಮಾನ್ಯ ಉಪಲೋಕಾಯುಕ್ತ-1 ರವರ ವರದಿಯಲ್ಲಿ ನಮೂದಿಸಲಾಗಿರುತ್ತದೆ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶಗಳು ಕಂಡು ಬಂದಿರುತ್ತವೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ವರದಿಸಲಾಗಿರುತ್ತದೆ.**

(ಅ) ಸಾರ್ವಜನಿಕರು ಉದ್ದರಾಮನಹಳ್ಳಿ ಗ್ರಾಮದಲ್ಲಿ ರಸ್ತೆ ಪಕ್ಕದಲ್ಲಿ ಪೆಟ್ಟಿಗೆ ಅಂಗಡಿಗಳನ್ನು ಇಟ್ಟು ಸುಗಮ ಸಂಚಾರಕ್ಕೆ ತೊಂದರೆ ಉಂಟು ಮಾಡಿದ್ದಾರೆಂದು ಆಪಾದಿಸಿದ್ದಾರೆ. ಎದುರುದಾರ ನಂ.-1 ರವರು ಈತಾತ್ಕಾಲಿಕ ಪೆಟ್ಟಿಗೆ ಅಂಗಡಿಗಳು

ಲೋಕೋಪಯೋಗಿ ಇಲಾಖೆಯ ಸ್ಥಳದಲ್ಲಿ ಇಟ್ಟಿರುತ್ತಾರೆ. ಅಂತ ತಿಳಿಸಿದ್ದಾರೆ. ಈ ವಿಷಯವನ್ನು ಎದುರುದಾರ ನಂ–3 ರವರು ಒಪ್ಪಿಕೊಂಡಿದ್ದಾರೆ. ಎದುರುದಾರ ನಂ.3 ರವರು ಸಹ ತಾತ್ಕಾಲಿಕ ಅಂಗಡಿಗಳು ಸಾರ್ವಜನಿಕ ಸ್ಥಳದಲ್ಲಿ ಅತಿಕ್ರಮಿಸಿರುವುದನ್ನು ಒಪ್ಪಿಕೊಂಡಿದ್ದು ಆದರೆ ಇವುಗಳನ್ನು ಸ್ಥಳಾಂತರಿಸುವ ಅಧಿಕಾರ ವ್ಯಾಪ್ತಿ ಎದುರುದಾರ ನಂ.1 ರವರಿಗೆ ಮಾತ್ರ ಇರುತ್ತದೆ ಅಂತ ತಿಳಿಸಿರುತ್ತಾರೆ.

(ಆ) ಈ ಎಲ್ಲಾ ಅಂಶಗಳನ್ನು ಪರಿಶೀಲಿಸಿದಾಗ ಎದುರುದಾರ 1 ಮತ್ತು 2 ರವರು ಒಂದೇ ಇಲಾಖೆಯ ವ್ಯಾಪ್ತಿಗೆ ಬರುತ್ತಿದ್ದು, ಆದರೆ ಎದುರುದಾರ 3 ಇವರು ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಬರುತ್ತಾರೆ. ಸದರಿ ಪೆಟ್ಟಿಗೆ ಅಂಗಡಿಗಳನ್ನು ಉದ್ದರಾಮನಹಳ್ಳಿ ಗ್ರಾಮದಲ್ಲಿ ಇಟ್ಟಿರುವುದರಿಂದ, ಇದನ್ನು ತಹಶೀಲ್ದಾರ್ ರವರು ಮೋಜಣಿ ಇಲಾಖೆಯಿಂದ ಮೋಜಣಿ ಮಾಡಿ ನೀಡಿದ ವರದಿ ಪ್ರಕಾರ ಅದು ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಆದ್ದರಿಂದ, ಈ ಎಲ್ಲಾ ಎದುರುದಾರರು ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಒಬ್ಬರ ಮೇಲೆ ಒಬ್ಬರು ಜವಾಬ್ದಾರಿಯನ್ನು ಹೊರಸುತ್ತಿರುವುದು ಕಂಡು ಬರುತ್ತದೆ. ಆದರೆ ಯಾವೊಬ್ಬ ಎದುರುದಾರರು ಜನರ ಸಮಸ್ಯೆಗಳಿಗೆ ಸ್ಪಂದಿಸದಿರುವುದು ದಿಟವಾಗಿರುತ್ತದೆ. ಆದ್ದರಿಂದ ಎದುರುದಾರರು ಗ್ರಾಮದ ಜನರು ಸಾರ್ವಜನಿಕ ಆಸ್ತಿಯನ್ನು ಅತಿಕ್ರಮಿಸಿ ಪೆಟ್ಟಿಗೆ ಅಂಗಡಿಯನ್ನು ಇಟ್ಟಿದ್ದರೂ ಸಹ ಆ ಬಗ್ಗೆ ದೂರು ಬಂದರೂ ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ವಹಿಸಿದ್ದಾರೆಂದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಎದುರುದಾರರು 1 ರಿಂದ 3ನೇ ಅಧಿಕಾರಿ/ನೌಕರರು ನೀಡಿರುವ ಲಿಖಿತ ರಕ್ಷಣಾ ಹೇಳಿಕೆಗಳು ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಸದರಿ ಆರೋಪಿತ ಅಧಿಕಾರಿಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ —(ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ತಮಗೆ

ವಹಿಸಿಕೊಡುವಂತೆ ಹಾಗೂ ಎದುರುದಾರರು-3 ಇವರು ಈಗಾಗಲೇ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ) ರನ್ವಯ ಅನುಮತಿ ನೀಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(1) ರನ್ವಯ ಈ ಪ್ರಕರಣದಲ್ಲಿ ಉದ್ದರಾಮನಹಳ್ಳಿ ಗ್ರಾಮದಲ್ಲಿ ಜನರು ಅನಧಿಕೃತವಾಗಿ ರಸ್ತೆ ಹಾಗೂ ಇತರೆ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಇಟ್ಟಂತಹ ಡಬ್ಬಿ ಅಂಗಡಿಗಳನ್ನು ತೆರವುಗೊಳಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡುವಂತೆ ನಿರ್ದೇಶಿಸಿರುತ್ತದೆ. ಅಂತೆಯೇ ಕ್ರಮವಹಿಸುವಂತೆ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಎದುರುದಾರರು ಎದುರುದಾರರು-1ರವರಾದ ಶ್ರೀ ಚಿಕ್ಕದಾಸಪ್ಪ, ನಿವೃತ್ತ ಕಾರ್ಯಪಾಲಕ ಇಂಜಿನೀಯರ್ ಲೋಕೋಪಯೋಗಿ ಬಂದರು ಮತ್ತು ಜಲಸಾರಿಗೆ ಇಲಾಖೆ, ಉಪ ವಿಭಾಗ ಶಿರಾ, ಇವರು ಲೋಕೋಪಯೋಗಿ ಇಲಾಖೆಯ ಸೇವೆಗೆ ಸೇರಿದ ಅಧಿಕಾರಿಯಾಗಿರುವುದರಿಂದ, ಇವರಿಗೆ ಸಂಬಂಧಿಸಿದಂತೆ, ಮಾನ್ಯ ಉಪಲೋಕಾಯುಕ್ತರು-1 ರವರ ಶಿಫಾರಸ್ಸಿನಂತೆ, ಕ್ರಮವಹಿಸುವಂತೆ, ಅಧಿಕಾರಿಯ ಮಾತೃ ಇಲಾಖೆಯಾದ ಲೋಕೋಪಯೋಗಿ ಇಲಾಖೆಯನ್ನು ಕೋರಲಾಗಿರುತ್ತದೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(1) ರನ್ವಯ ಶಿಫಾರ್ಸ್ಸು ಹಾಗೂ ಅದರೊಂದಿಗಿನ ಅಡಕಗಳನ್ನು ಕಳುಹಿಸಿ ಕೊಡುತ್ತಾ, ಪ್ರಕರಣದಲ್ಲಿನ ಉದ್ದರಾಮನಹಳ್ಳಿ ಗ್ರಾಮದಲ್ಲಿ ಜನರು ಅನಧಿಕೃತವಾಗಿ ರಸ್ತೆ ಹಾಗೂ ಇತರೆ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿ ಇಟ್ಟಂತಹ ಡಬ್ಬಿ ಅಂಗಡಿಗಳನ್ನು ತೆರವುಗೊಳಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಅಗತ್ಯ ಕ್ರಮವಹಿಸುವಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ತುಮಕೂರು ಇವರನ್ನು ಕೋರಲಾಗಿದೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಶಿಫಾರಸ್ಸು ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರು 1, 2 ಮತ್ತು 3 ರವರುಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ 12(3)

ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಶ್ರೀ ಬಿ.ತಿಮ್ಮರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಶಿರಾ, ತುಮಕೂರು ಜಿಲ್ಲೆ. ಹಾಗೂ ಶ್ರೀ ಕೆ.ವಿಜಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನಾದೂರು ಗ್ರಾಮ ಪಂಚಾಯತಿ ಶಿರಾ ತಾಲ್ಲೂಕು. ಇವರುಗಳ ವಿರುದ್ಧದ ಆರೋಪಗಳ ಸಂಬಂಧ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 219 ವಿಸೇಬಿ 2016 ಬೆಂಗಳೂರು ದಿನಾಂಕ:30-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಬಿ.ತಿಮ್ಮರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಶಿರಾ, ತುಮಕೂರು ಜಿಲ್ಲೆ. ಹಾಗೂ ಶ್ರೀ ಕೆ.ವಿಜಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನಾದೂರು ಗ್ರಾಮ ಪಂಚಾಯತಿ ಶಿರಾ ತಾಲ್ಲೂಕು, ಇವರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

30/11/2016
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ತುಮಕೂರು.
4) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.